FRNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ



| ಭಾಗ–III | ಬೆಂಗಳೂರು,. ಸೋಮವಾರ, ಅಕ್ಟೋಬರ್ ೨೧, ೨೦೧೯ (ಆಶ್ವಯುಜ ೨೯, ಶಕ ವರ್ಷ ೧೯೪೦) | ನಂ. ೯೧೯ |
|---|---|---|
| Part–III | Bengaluru, Monday, October 21, 2019 (Ashwayuja 29, Shaka Varsha 1940) | No. 919 |



### ರಾಜ್ಯ ಚುನಾವಣಾ ಆಯೋಗ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು–52.

### ರಾಜ್ಯ ಚುನಾವಣಾ ಆಯೋಗದ ಆದೇಶ

**ಸಂಖ್ಯೆ: ರಾಚುಆ:130:ಇಯುಬಿ:2019, ಬೆಂಗಳೂರು, ದಿನಾಂಕ: 20.10.2019.**

ರಾಜ್ಯ ಚುನಾವಣಾ ಆಯೋಗವು ಸಂವಿಧಾನದ ಪರಿಚ್ಛೇದ 243ಜೆಡ್ಎ ಹಾಗೂ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಲ್ಲಿ ಪ್ರದತ್ತವಾಗಿರುವ ಅಧಿಕಾರದ ಮೇರೆಗೆ ಈ ಕೆಳಗೆ ನಮೂದಿಸಿರುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ 5 ಸದಸ್ಯ ಸ್ಥಾನಗಳಿಗೆ ಈ ಕೆಳಕಂಡ ಚುನಾವಣಾ ವೇಳಾಪಟ್ಟಿಯಂತೆ ಉಪ ಚುನಾವಣೆಯನ್ನು ನಡೆಸಲು ಆದೇಶಿಸಿದೆ.

| ಕ್ರ.ಸಂ. | ಜಿಲ್ಲೆ | ನಗರ ಸ್ಥಳೀಯ ಸಂಸ್ಥೆ | ವಾರ್ಡ್ ಸಂಖ್ಯೆ |
|---|---|---|---|
| 1. | ಹಾಸನ | ಹೊಳೆನರಸೀಪುರ ಪುರಸಭೆ | 4 |
| 2. | ಚಾಮರಾಜನಗರ | ಕೊಳ್ಳೇಗಾಲ ನಗರಸಭೆ | 19 |
| 3. | ವಿಜಯಪುರ | ಚಡಚಣ ಪಟ್ಟಣ ಪಂಚಾಯತಿ | 5 |
| 4. | ಬಾಗಲಕೋಟೆ | ಮಹಾಲಿಂಗಪುರ ಪುರಸಭೆ | 17 |
| 5. | ಕಲಬುರಗಿ | ಚಿತ್ತಾಪುರ ಪುರಸಭೆ | 10 |

### ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 24.10.2019 (ಗುರುವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 31.10.2019 (ಗುರುವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 02.11.2019 (ಶನಿವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 04.11.2019 (ಸೋಮವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | **12.11.2019 (ಮಂಗಳವಾರ)** |
| 6 | ಮರು ಮತದಾನ ಇದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | 13.11.2019 (ಬುಧವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 14.11.2019 (ಗುರುವಾರ) |

| | | |
|---|---|---|
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 14.11.2019 (ಗುರುವಾರ) |

* **ಸದಾಚಾರ ಸಂಹಿತೆಯು ಈ ತಕ್ಷಣದಿಂದ ಜಾರಿಗೆ ಬರುತ್ತದೆ ಅಂದರೆ ದಿನಾಂಕ: 20.10.2019 ರಿಂದ ದಿನಾಂಕ: 14.11.2019 ರವರೆಗೆ ಆಯಾ ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ.**

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 8ರ ಪ್ರಕಾರ ಉಪ ಚುನಾವಣೆ ನಡೆಯುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ–1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯ ಅನುಬಂಧದಲ್ಲಿ ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ಹೆಸರು, ವಾರ್ಡಿನ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ–ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ–1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**ವಿಶೇಷ ಸೂಚನೆ :–**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಉಪ ಚುನಾವಣೆ ನಡೆಯಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಉಪ ಚುನಾವಣೆ ನಡೆಸಲಾಗುವ ನಗರ ಸ್ಥಳೀಯ ಸಂಸ್ಥೆಗಳ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳಿಗೆ ಸೂಕ್ತ ತರಬೇತಿಯನ್ನು ನೀಡುವುದು ಮತ್ತು ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ, ಸುತ್ತೋಲೆ ಹಾಗೂ ನಿರ್ದೇಶನ ಪತ್ರಗಳ ಪ್ರತಿಯನ್ನು ನೀಡುವುದು.
3. **ಘೋಷಣಾ ಪತ್ರ / ಪ್ರಮಾಣಪತ್ರ:** ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ, ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳು, ತನ್ನ ಸ್ವವಿವರ, ವಿದ್ಯಾರ್ಹತೆ ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ / ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.
4. **ಸರ್ಕಾರದ ಅಧಿಸೂಚನೆ–II ಸಂಖ್ಯೆ: ಸಿಆಸುಇ/13/ಹೆಚ್‌ಹೆಚ್‌ಎಲ್/2018, ದಿನಾಂಕ: 23.11.2018 ರಂತೆ ದಿನಾಂಕ: 26.10.2019ರ ನಾಲ್ಕನೇ ಶನಿವಾರವು ನೆಗೋಷಿಯೆಬಲ್ ಇನ್ಸ್ಟ್ರುಮೆಂಟ್ಸ್ ಆಕ್ಟ್ 1881ರ ಪ್ರಕಾರ ಸಾರ್ವತ್ರಿಕ ರಜಾ ದಿನ ಅಲ್ಲದ ಕಾರಣ ಅಂದು ಚುನಾವಣಾಧಿಕಾರಿಗಳು ತಮ್ಮ ಕಚೇರಿಯಲ್ಲಿ ಹಾಜರಿದ್ದು ನಾಮಪತ್ರಗಳನ್ನು ಸ್ವೀಕರಿಸಬೇಕಾಗಿರುತ್ತದೆ.**
5. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ:ಎಸ್‌ಇಸಿ.10. ಎಂಐಎಸ್‌ಸಿ.2016 ದಿನಾಂಕ: 29.06.2016 ಹಾಗೂ ತಿದ್ದುಪಡಿ ದಿನಾಂಕ: 06.07.2016 ರಂತೆ ಕ್ರಮವಹಿಸುವುದು.
6. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.
7. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.14.ಇಯುಬಿ.2017 ದಿನಾಂಕ: 10.03.2017 ರಂತೆ ಮತಪತ್ರದಲ್ಲಿ "NOTA" ಅವಕಾಶ ಕಲ್ಪಿಸುವುದು.
8. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.28.ಇಯುಬಿ.2018 ದಿನಾಂಕ: 01.06.2018 ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.

ಚುನಾವಣಾ ಪ್ರಕ್ರಿಯೆ ಜಾರಿಯಲ್ಲಿರುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

**ನಾಗರಾಜು.ಎನ್.ಆರ್.**
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಟಿ7) ಪ್ರತಿಗಳು: 50